k2

ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರರವರ ಕಾರ್ಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/43/2015-16. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಮಾರಕ್ಕ ಗಂಡ ಶಿವಣ್ಣ<br>2)ಪಿ.ಬೋರಯ್ಯ ತಂದೆ ತಿಪ್ಪಯ್ಯ<br>ಮೀನಕೇರಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಗುಡೇಕೋಟೆ |
| ಕೂಡ್ಲಿಗಿ ತಾಲೂಕು ಮೀನಕೇರಿ ಗ್ರಾಮದ ಸನಂ 316/2. ವಿಸ್ತೀರ್ಣ 4-76. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಮೀನಕೇರಿ ಗ್ರಾಮದ ಸನಂ 316/2. ವಿಸ್ತೀರ್ಣ 4-76. ಎಕ್ರೆ ಜಮೀನನ್ನು ಸದರಿ ಗ್ರಾಮದ ಮಾರಕ್ಕ ಗಂಡ ಬಸಣ್ಣ ಇವರು ದಿನಾಂಕ 10-08-2015 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಮೀನಕೇರಿ ಇವರು ನಮೂನೆ-21 ನೋಟಿಸನ್ನು ದಿನಾಂಕ 24-09-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷ ಹೊಂದಾಣಿಕೆ ಇಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 14/2015-16. ದಿನಾಂಕ 25-10-2015. ರಲ್ಲಿ ಗೈರು ಮಂಜೂರು ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 19-01-2016 ರಿಂದ 21-06-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಮೀನಕೇರಿ ಗ್ರಾಮದ ಸನಂ 316/2. ವಿಸ್ತೀರ್ಣ 4-76. ಎಕ್ರೆ ಜಮೀನು ನನ್ನ ಗಂಡನಾದ ಬೋರಯ್ಯ ತಂದೆ ಅಲಿಯಾಸ್ ಬಸಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ತಮ್ಮ ಸ್ವ ಇಚ್ಚೇಯಿಂದ ತಮ್ಮ ಹಕ್ಕು ಆದೀನದಲ್ಲಿರುವ ಆಸ್ತೀಯನ್ನು ದಿನಾಂಕ 10-08-2015 ರಂದು ನನ್ನ ಹೆಸರಲ್ಲಿ ಪಾಲು ವಿಭಾಗ ಪತ್ರ ಬರೆಯಿಸಿ ಕೊಟ್ಟಿರುತ್ತಾರೆ. ಕಾರಣ ಸದರಿ ಪಾಲು ವಿಭಾಗದ ಪತ್ರದಂತೆ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ಪಹಣಿ ಹಾಗೂ ವಂಶವೃಕ್ಷದಲ್ಲಿ ಬೋರಯ್ಯ ಅಲಿಯಾಸ್ ಬಸಯ್ಯ ತಂದೆ ಲೇಟ್ ತಿಪ್ಪಯ್ಯ. ಎಂದು ಇದ್ದು ಚುನಾವಣಾ ಗುರುತಿನ ಚೀಟಿಯಲ್ಲಿ ಬಸಣ್ಣ ತಂದೆ ತಿಪ್ಪಯ್ಯ. ಎಂದು ನಮೂದು ಇರುವುದರಿಂದ ಹಾಗೂ ಲೆಕ್ಕ ದಾಖಲೆಗಳು ತಾಳೆ ಇಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಮೀನಕೇರಿ ಗ್ರಾಮದ ಸನಂ 316/2. ವಿಸ್ತೀರ್ಣ 4–76. ಎಕ್ರೆ ಜಮೀನಿನ ವಂಶವೃಕ್ಷ ಹಾಗೂ ಇತರೆ ಲೆಕ್ಕ ದಾಖಲೆಗಳು ತಾಳೆ ಇಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21–06–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಮಾರಕ್ಕ ಗಂಡ [illegible] ತಂದೆ ಲೇಟ್ ತಿಪ್ಪಯ್ಯ. ಮೀನಕೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಗುಡೇಕೋಟೆ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.